**ಕೃಷಿ ವಿಶ್ವ ವಿದ್ಯಾನಿಲಯ**
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು-560065**
*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 11.01.2022

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 12-01-2022 ರಿಂದ 16-01-2022 ವರೆಗೆ)

| ನಿಯತಾಂಕಗಳು | 12.01.2022 | 13.01.2022 | 14.01.2022 | 15.01.2022 | 16.01.2022 |
|---|---|---|---|---|---|
| ಮಳೆ (ಮಿ ಮಿ) | 1 | 2 | 2 | 2 | 2 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 29 | 29 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 17 | 17 | 17 | 17 | 17 |
| ಮೋಡ ( ಪ್ರಮಾಣ) | 4 | 4 | 4 | 5 | 4 |
| ಆರ್ದ್ರತೆ 7.20 ಬೆ (ಶೇ) | 88 | 88 | 90 | 90 | 90 |
| ಆರ್ದ್ರತೆ 2.20 ಮ (ಶೇ) | 51 | 51 | 54 | 54 | 54 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2 | 2 | 1 | 1 | 2 |
| ಗಾಳಿಯ ದಿಕ್ಕು ( ಡಿಗ್ರಿ) | 156 | 162 | 225 | 225 | 112 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ತುಂತುರು ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **$29.0^{o}$ C** ಮತ್ತು ಕನಿಷ್ಠ **$17.0^{o}$ C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **88-90 %** ಇದ್ದು ಮಧ್ಯಾಹ್ನ **51-54 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **1-2** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | • ಹಿಂಗಾರಿನಲ್ಲಿ ಬಿತ್ತನೆಯಾದ ಬೆಳೆಗಳಿಗೆ ನೀರು ಕೊಡಬೇಕು<br>• ರೈತ ಬಾಂದವರು ಕಟಾವು ಮಾಡಿರುವ ಮುಂಗಾರು ಬೆಳೆಗಳನ್ನು ಸ್ವಚ್ಛ ಮಾಡಿ ಒಕ್ಕಣೆ ಮಾಡಿ, ಬಿಸಿಲಿನಲ್ಲಿ ಒಣಗಿಸಿ ಚೀಲದಲ್ಲಿ ಶೇಖರಿಸಿ.<br>• ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು.<br>• ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| ಮಾವು | ಹೂವಿನ ಹಂತ | 1. ಕಳೆದ ಒಂದು ತಿಂಗಳಿನಿಂದ ಶುಷ್ಕ ವಾತಾವರಣವಿರುವುದರಿಂದ ಮಾವು ಬೆಳೆಯಲ್ಲಿ ಬೂದಿರೋಗದ ಸಂಭವ ಹೆಚ್ಚಾಗಿ ಕಂಡುಬಂದಿರುತ್ತದೆ.<br>2. ಕನಿಷ್ಠ ಉಷ್ಣಾಂಶವು 3-4 $^{o}$C ಹಟಾತ್ ಕುಸಿತದಿಂದ ಮಾವಿನ ಹೂವಿನ ಮೇಲೆ ತುಂಬಾ ಪರಿಣಾಮ ಬಿದ್ದು ಹೂವುಗಳು ಉದುರುವುದು ಸರ್ವೇ ಸಾಮಾನ್ಯವಾಗಿದೆ. ಇದರ ಹತೋಟಿಗೆ ಪ್ಯಾಕ್ಲೋಬ್ಯುಟಜಾಲ್ ಅನ್ನು ಸಿಂಪಡಿಸಿ ಇದರಿಂದ ಎಲೆ ಚಿಗುರುವುದು ನಿಲ್ಲುತ್ತದೆ ಮತ್ತೆ ಹೊಸ ಹೂವುಗಳು ಬಿಡಲು ಪ್ರಾರಂಭವಾಗುತ್ತವೆ.<br>3. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>4. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ |

| | | |
|---|---|---|
| | | ನೀರಿನಲ್ಲಿ ಸಿಂಪಡಿಸಿ.<br>5. ಮಾವಿನ ಗಿಡದ ಕೆಳಗೆ ಬೆಳೆದಿರುವ ಹುತ್ತಗಳನ್ನು ನಾಶಪಡಿಸಬೇಕು ಮತ್ತು ಗೆದ್ದಲು ಹುಳುಗಳನ್ನು ನಾಶಪಡಿಸಲು ಕ್ಲೋರೊಪೈರಿಫಾಸ್ 5–10 ಮಿ.ಲೀ/ಪ್ರತಿ ಲೀ ನಿರಿಗೆ ಬೆರಸಿ ಹುತ್ತಗಳಿಗೆ ಸುರಿಯಬೇಕು ಅಥವಾ ಒಂದು ಮೀಟರ್ ಸುತ್ತಳತೆ ಇರುವ ಹುತ್ತಕ್ಕೆ 2 ಅಲ್ಯೂಮಿನಿಯಂ ಪಾಸ್ಫೈಡ್ ಮಾತ್ರೆಗಳನ್ನು ಹಾಕಿ ಗಾಳಿ ಹೊರ ಹೋಗದಂತೆ ಎಲ್ಲಾ ರಂಧ್ರಗಳನ್ನು ಹಸಿ ಮಣ್ಣಿನಿಂದ ಮುಚ್ಚಿ. |
| **ಪಶುಸಂಗೋಪನೆ** | | 1. **ಕಾಲುಬಾಯಿ ರೋಗ (ಗೆರಸಲು ರೋಗ) :**ಜ್ವರ ಹೆಚ್ಚಾಗಿ ಬಾಯಿಯಲ್ಲಿ ಗುಳ್ಳೆಗಳು ಕಾಣಿಸಿ, ಇವು ಒಡೆದು ನಾಲಗೆಯ ಮೇಲೆ ಗಾಯಗಳಾಗುತ್ತವೆ.<br>2. ಇದರ ಹತೋಟಿಗೆ ಮಿಶ್ರತಳಿ ದನಗಳಿಗೆ ಪ್ರತಿ ವರ್ಷ ಎರಡು ಬಾರಿ **ಜನವರಿ** ಮತ್ತು ಜುಲೈನಲ್ಲಿ ಲಸಿಕೆ ಹಾಕಿಸುವುದು.<br>3. ನರಳುವ ದನಗಳನ್ನು ಬೇರ್ಪಡಿಸುವುದು.<br>4. ಬಾಯಿ, ಗೊರಸುಗಳನ್ನು ಮತ್ತು ಉಪಕರಣಗಳನ್ನು ಅಡಿಗೆ ಸೋಡಾ ದ್ರಾವಣದಿಂದ ತೊಳೆಯಬೇಕು.<br>5. ಕೊಟ್ಟಿಗೆಯನ್ನು ಕ್ರಿಮಿನಾಶಕ ದ್ರಾವಣದಿಂದ ಶುಚಿ ಮಾಡಬೇಕು.<br>6. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>7. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |
| **ಕೋಳಿ ಸಾಕಾಣಿಕಾ** | | 1. ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^0$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^0$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>2. ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಬ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>3. ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು ಮುಚ್ಚಿ ಚಳಿಯಿಂದ ರಕ್ಷಿಸಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.<br>2. **ಸುಣ್ಣ ಕಟ್ಟು ರೋಗ:** ಈ ರೋಗವು ಸಾಮಾನ್ಯವಾಗಿ ಮಳೆಗಾಲ ಮತ್ತು ಚಳಿಗಾಲದಲ್ಲಿ ಕೆಲವು ಶಿಲೀಂಧ್ರಗಳ ಸೋಂಕಿನಿಂದ (ಬ್ಯುವೇರಿಯಾ ಬ್ಯಾಸಿಯಾನಾ) ಬರುತ್ತದೆ.<br>**3.** ರೋಗವನ್ನು ಯಶಸ್ವಿಯಾಗಿ ನಿಯಂತ್ರಿಸಬೇಕಾದರೆ ಉಷ್ಣಾಂಶ ಮತ್ತು ತೇವಾಂಶವನ್ನು ಶಿಫಾರಸ್ಸು ಮಾಡಿದ ರೀತಿಯಲ್ಲಿ ಕಾಪಾಡಬೇಕು.<br>**4.** ರೇಷ್ಮೆ ಸಾಕಾಣಿಕಾ ಘಟಕದಲ್ಲಿ ಕನಿಷ್ಠ ಉಷ್ಣಾಂಶವು $22^0$ ಸೆ. ಗಿಂತ ಕಡಿಮೆಯಾದಲ್ಲಿ ರೂಮ್ ಹೀಟರ್‌ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುವ್ಯದು ಅವಶ್ಯಕ.<br>**5.** ಹಾಸಿಗೆಯನ್ನು ತೆಳುವಾಗಿಟ್ಟು ಹಳೆ ಹಾಸಿಗೆ ಒಣಗುವಂತೆ ಸುಣ್ಣವನ್ನು ಹಂತಕ್ಕೆ ತಕ್ಕಂತೆ ಸರಿ ಪ್ರಮಾಣದಲ್ಲಿ ಧೂಳೀಕರಿಸಿ ನೋಡಿಕೊಳ್ಳಬೇಕು.<br>6. ಕಾಲಕಾಲಕ್ಕೆ ಹಾಸಿಗೆ ಸೋಂಕು ನಿವಾರಕಗಳಾದ ಸುರಕ್ಷ, ವಿಜೇತ, ಅಂಕುಶ್, ಸಂರಕ್ಷಕ ಮುಂತಾದ ಔಷಧಿಗಳನ್ನು ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಧೂಳೀಕರಿಸುತ್ತಿರಬೇಕು ಮತ್ತು ರೋಗ ಕಾಣಿಸಿಕೊಂಡಾಗ ಹತೋಟಿ ಬರುವವರೆಗೂ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಸೋಂಕು ನಿವಾರಕಗಳನ್ನು ಬಳಸಬೇಕು. |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಫ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.